# 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಚನ್ನರಾಯಪಟ್ಟಣ.

## CC 879/2020

| | | | |
|---|---|---|---|
| ಸಾಕ್ಷಿದಾರರ ಹೆಸರು | ಃ | ರಾಮಕೃಷ್ಣ | **C.W – 7** |
| ತಂದೆಯ ಹೆಸರು | ಃ | ತೋಪೇಗೌಡ | **P.W – 5** |
| ವಯಸ್ಸು | ಃ | 65 ವರ್ಷ | |
| ಉದ್ಯೋಗ | ಃ | ನಿವೃತ್ತ ಸಹಾಯಕ ಉಪ ನಿರೀಕ್ಷಕರು | **ಪ್ರಮಾಣ ವಚನ ಬೋಧಿಸಲಾಯಿತು.** |
| ವಾಸ | ಃ | ಕೆ.ಚೌಡೇನಹಳ್ಳಿ ಗ್ರಾಮ. | ದಿನಾಂಕಃ **17.07.2026** |

ಮುಖ್ಯವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದ

ನಾನು 2019 ರಿಂದ 2021 ರವರೆಗೆ ನುಗ್ಗೇಹಳ್ಳಿ ಪೊಲೀಸ್ ಠಾಣೆಯಲ್ಲಿ, ಎ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 25.08.2021 ರಂದು ನಾನು ಠಾಣಾ ಪ್ರಭಾರದಲ್ಲಿ ಇದ್ದಾಗಿ ನುಗ್ಗಹಳ್ಳಿ ಸರಿಕಾರಿ ಆಸ್ಪತ್ರೆಯಿಂದ ಬಂದ ಮೆಮೋವನ್ನು ಸ್ವೀಕರಿಸಿ, ನಂತರ ಆಸ್ಪತ್ರೆಗೆ ಭೇಟಿ ನೀಡಿ, ಅಲ್ಲಿ ಚಾಸಾ–1 ರವರು ಹಲ್ಲೆ ಬಗ್ಗೆ ನೀಡಿದ ದೂರನ್ನು ಸ್ವೀಕರಿಸಿ, ಠಾಣೆಗೆ ಬಂದು ಸಂಜೆ ಸುಮಾರು 05.30 ಗಂಟೆಗೆ ಪ್ರ.ವ.ವರದಿಯನ್ನು ತಯಾರಿಸಿ ಮಾನ್ಯ ಘನ ನ್ಯಾಯಾಲಯಕ್ಕೆ ಹಾಗೂ ನನ್ನ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ನನ್ನ ಮೇಲಾಧಿಕಾರಿಗಳ ಮೌಖಿಕ ಆದೇಶದ ಮೇರೇಗೆ ದಿಃ 26.08.2021 ರಂದು ಚಾಸಾ–2ರವರು ಕೃತ್ಯ ನಡೆದ ಸ್ಥಳವನ್ನು ತೋರಿಸಿದ ಮೆರೇಗೆ ಚಾಸಾ–4 ಮತ್ತು 5 ರವರ ಸಮಕ್ಷಮ ಬೆಳಿಗ್ಗೆ 10.00 ರಿಂದ 11.00 ಗಂಟೆಯವರೆಗೆ ಮಹಜರು ಕ್ರಮ ಜರುಗಿಸಿ, ಕೃತ್ಯಕ್ಕೆ ಉಪಯೋಗಿಸಿದ ಒಂದು ಕಾಡು ಜಾತಿಯ 3 ಅಡಿ ಉದ್ದದ ಕೋಲು ಹಾಗೂ ಮತ್ತೊಂದು ಎಡಮಟ್ಟೆಯನ್ನು ಅಮಾನತುಪಡಿಸಿಕೊಂಡಿ ಪಂಚರ ಸಹಿಯನ್ನು ಪಡೆದಿರುತ್ತೇನೆ. ಸಾಕ್ಷಿ ಕೃತ್ಯ ಪಂಚನಾಮೆಯ ಕಾಲಕ್ಕೆ ಪೋಟೋಗಳನ್ನು ತೆಗೆದಿರುತ್ತೇನೆ. ಸಾಕ್ಷಿ ನೋಡಿ ಗುರುತಿಸಿದ ಮಹಜರನ್ನು ಈಗಾಗಲೇ ನಿಪಿ–2 ಎಂದು ಗುರುತಿಸಿದ್ದು, ಸಾಕ್ಷಿ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸಾಕ್ಷಿಯ ಸಹಿಯನ್ನು ನಿಪಿ–2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ಪೋಟೋವನ್ನು ನೋಡಿ ಗುರುತಿಸಿದ ಮೇರೆಗೆ, ಸದರಿ ಪೋಟೋವನ್ನು ನಿಪಿ–4 ಎಂದು ಗುರುತಿಸಲಾಯಿತು. ಪೊಲೀಸ್ ಠಾಣೆಯಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ದಾಖಲು ಮಾಡಿರುತ್ತೇನೆ.

ನಂತರ ಅಮಾನತುಪಡಿಸಿಕೊಂಡ ಮುದ್ದೆ ಮಾಲುಗಳನ್ನು ಠಾಣೆಗೆ ತಂದು ಪಿ.ಎಫ್. ಮುಖಾಂತರ ಮಾನ್ಯ ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದಿಃ 26.09.2020 ರಂದು ನುಗ್ಗೆಹಳ್ಳಿ ಸರ್ಕಾರಿ ಆಸ್ಪತ್ರೆಯಿಂದ ಚಾಸಾ–1ರವರ ಗಾಯದಪ್ರಮಾಣಪತ್ರವನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಆರೋಪಿತರಿಗೆ ದಂ.ಪ್ರ.ಸಂ. 41(ಎ) ರಡಿಯಲ್ಲಿ ನೋಟೀಸ್ ಜಾರಿ ಮಾಡಿ, ಆರೋಪಿತರು ಹಾಜರಾದ ಮೇಲೆ ಅವರಿಗೆ ತಿಳುವಳಿಕೆ ನೀಡಿ, ತನಿಖೆಗೆ ಸಹಕರಿಸುವಂತೆ ಹೇಳಿ ಬಿಡಲಾಗಿದೆ.

ತನಿಖೆ ಪೂರ್ಣಗೊಂಡ ನಂತರ ಆರೋಪಿತರ ವಿರುದ್ಧ ದೋಷರೋಪಣ ಪಟ್ಟಿಯನ್ನು ಮಾನ್ಯ ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ಸಾಕ್ಷಿ ದೂರಿನಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದೂರನ್ನು ನಿಪಿ–5 ಎಂದುಚಿ ಸಾಕ್ಷಿಯ ಸಹಿಯನ್ನು ನಿಪಿ–5(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಪ್ರ.ವ.ವರದಿಯಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಪ್ರ.ವ.ವರದಿಯನ್ನು ನಿಪಿ–6 ಎಂದು, ಸಾಕ್ಷಿ ಸಹಿಯನ್ನು ನಿಪಿ–6(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಎರಡು ಪೋಟೋಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ–7 ಮತ್ತು 8 ಎಂದು ಗುರುತಿಸಲಾಯಿತು. ಸಾಕ್ಷಿ ಚಾಸಾ–1ರವರ ಗಾಯದ ಪ್ರಮಾಣಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ–3 ಎಂದು ಗುರತಿಸಲಾಗಿದೆ, ಸಾಕ್ಷಿಯ ಸಹಿಯನ್ನು ನಿಪಿ–3(ಬಿ) ಎಂದು ಗುರುತಿಸಲಾಯಿತು. ಅಮಾನತುಪಡಿಸಿಕೊಂಡ ಮುದ್ದೆ ಮಾಲುಗಳನ್ನು ನೋಡಿದರೆ ಗುರುತಿಸಬಲ್ಲೆ. ಸಾಕ್ಷಿ ನ್ಯಾಯಾಲಯದ ಮುಂದೆ ಇರುವ ಮುದ್ದೆ ಮಾಲು 1 ಮತ್ತು 2 ಅನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿ ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ–** ಶ್ರೀ ವೈ.ಜೆ.ಎಂ. ಆರೋಪಿ ಪರ ವಕೀಲರಿಂದ

ನನಗೆ ಆಸ್ಪತ್ರೆಯಿಂದ ಸಂಜೆ 04.30 ಗಂಟೆಗೆ ಮೆಮೋ ಬಂದಿರುತ್ತದೆ. ಆಸ್ಪತ್ರೆಗೂ ಹಾಗೂ ನುಗ್ಗೆಹಳ್ಳಿ ಪೊಲೀಸ್ ಠಾಣೆಗೂ ಸುಮಾರು 100–150 ಮೀಟರ್ ಅಂತರ ಇರುತ್ತದೆ. ನಾನು ಆಸ್ಪತ್ರೆಗೆ ಸಂಜೆ 05.00 ಗಂಟೆಗೆ ಭೇಟಿ ನೀಡಿರುತ್ತೇನೆ. ಚಾಸಾ–1ರವರ ಬಳಿ ಸುಮಾರು ಜನ ಇದ್ದರು ಎಷ್ಟು ಎಂದು ಹೇಳಲು ಆಗುವುದಿಲ್ಲ. ನಾನು ಮುಖ್ಯ ವಿಚಾರಣೆಯಲ್ಲಿ ಹೇಳಿರುವಂತೆ ಆಸ್ಪತ್ರೆಗೆ ಭೇಟಿ ನೀಡಿಲ್ಲ, ಚಾಸಾ–1 ರಿಂದ ಯಾವುದೇ ದೂರನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ. ಚಾಸಾ–1 ಯಾವುದೇ ದೂರು ನೀಡದಿದ್ದರೂ ಅವರಿಗೆ ಸಹಾಯ ಮಾಡಲೆಂದು ಸುಳ್ಳು ಪ್ರ.ವ.ವರದಿಯನ್ನು ದಾಖಲು ಮಾಡಲಾಗಿದೆ ಎಂದರೆ ಸರಿಯಲ್ಲ.

ನಾನು ಕೃತ್ಯ ನಡೆದ ಸ್ಥಳಕ್ಕೂ ಠಾಣೆಗೆ ಸುಮಾರು 07–08 ಕಿ.ಮೀ. ಅಂತರ ಇದೆ. ಸದರಿ ವಿಚಾರವನ್ನು ನಿಪಿ–2 ರಲ್ಲಿ ಬರೆಸಿರುವುದಿಲ್ಲ. ಗಂಜಿಗೆರೆ ಗ್ರಾಮದಿಂದ ಕೃತ್ಯ ನಡೆದ ಸ್ಥಳಕ್ಕೆ ಅರ್ಧ ಕಿ.ಮೀ. ಅಂತರ ಇರುತ್ತದೆ. ಕೃತ್ಯ ನಡೆದ ಸ್ಥಳ ಚಾಸಾ–1ರವರಿಗೆ ಸೇರಿದೆ ಎಂಬ ಬಗ್ಗೆ ದಾಖಲೆಯನ್ನು ಕಂದಾಯ ಇಲಾಖೆಯಿಂದ ಪಡೆದು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ಮಹಜರಿನಲ್ಲಿ ಎಷ್ಟು ವಿಸ್ತೀರ್ಣ ಎಂದು ನಮೂದು ಮಾಡಿರುವುದಿಲ್ಲ. ಸ್ಥಳ ಮತ್ತು ಅಮಾನತು ಪಂಚರಿಗೆ ಯಾವುದೇ ನೋಟೀಸ್ ಜಾರಿ ಮಾಡಿರುವುದಿಲ್ಲ. ಪಂಚರು ಸ್ಥಳದಲ್ಲಿ ಇದ್ದರು. ನಾನು ಕೃತ್ಯ ಸ್ಥಳಕ್ಕೆ ಭೇಟಿ ನೀಡಿಲ್ಲ ಹಾಗೂ ಯಾವುದೇ ವಸ್ತುಗಳನ್ನು ಅಮಾನುಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ–1ರವರಿಗೆ ಅನುಕೂಲವಾಗಲೀ ಎಂದು ಪೊಲೀಸ್ ಠಾಣೆಯಲ್ಲಿ ಕುಳಿತು ಎಲ್ಲಾ ದಾಖಲೆಗಳನ್ನು ತಯಾರಿಸಲಾಗಿದೆ ಎಂದರೆ ಸರಿಯಲ್ಲ. ನಾನು ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಫೋಟೋಗಳನ್ನು ತೆಗೆದಿರುವುದಿಲ್ಲ ಹಾಗೂ ಮಹಜರಿಗೆ ಪಂಚರ ಸಹಿಯನ್ನು ಪಡೆದುಕೊಡಿಲ್ಲ ಎಂದರೆ ಸರಿಯಲ್ಲ.

ನಾನು ಚಾಸಾ–1ರವರ ಗಾಯದ ಪ್ರಮಾಣಪತ್ರವನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ನಾನು ಚಾಸಾ–1ರವರಿಗೆ ಅನುಕೂಲ ಮಾಡಲು ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರೂ ಅವರ ವಿರುದ್ಧ ಸುಳ್ಳು ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿ ಅದಕ್ಕೆ ಪೂರಕವಾಗಿ ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ** – ಇಲ್ಲ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ.ಚನ್ನರಾಯಪಟ್ಟಣ